ಇ) ಜಿಲ್ಲಾ ನ್ಯಾಯಾಲಯ ಹಾಗೂ ಸಿವಿಲ್ ನ್ಯಾಯಾಲಯಗಳನ್ನು ಎಂದು ಸ್ಥಾಪಿಸಲಾಗುವುದು?

ಶ್ರೀ ಡಿ. ಬಿ. ಚಂದ್ರೇಗೌಡ (ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆಗಳ ಸಚಿವರು) :

ಅ) ಹಾವೇರಿಯಲ್ಲಿ ಜಿಲ್ಲಾ ನ್ಯಾಯಾಲಯದ ಸ್ಥಾಪನೆಗೆ ಸ್ಥಳ ಲಭ್ಯವಿದೆ ಎಂದು ಉಚ್ಚ ನ್ಯಾಯಾಲಯವು ವರದಿ ಮಾಡಿರುವುದನ್ನು ಆಧರಿಸಿ ಹಾವೇರಿಯಲ್ಲಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವನ್ನು ಸ್ಥಾಪಿಸಲು ಮತ್ತು ಅಗತ್ಯವಾದ ಸಿಬ್ಬಂದಿ ಹುದ್ದೆಗಳ ಸೃಜನೆಗೆ ದಿನಾಂಕ 2-12-99ರ ಸಂಖ್ಯೆ ಲಾ 18 ಎಲ್‌ಸಿಇ 97ರ ಸರ್ಕಾರಿ ಆದೇಶದಲ್ಲಿ ಮಂಜೂರಾತಿ ನೀಡಲಾಗಿದೆ.

ಆ) ಇದು ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ಅದಷ್ಟು ತ್ವರಿತವಾಗಿ ಪ್ರಾರಂಭಿಸಲಾಗುವುದು.

**ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಹೊಸ ಪಶುವೈದ್ಯ ಆಸ್ಪತ್ರೆಗಳು**

1285 (1683) ಶ್ರೀ ಕೃಷ್ಣಪ್ಪ ವಿ. (ದೊಡ್ಡಬಳ್ಳಾಪುರ) : ಮಾನ್ಯ ಪಶುಸಂಗೋಪನಾ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಎಷ್ಟು ಪಶುಚಿಕಿತ್ಸಾ ಘಟಕಗಳನ್ನು ಪಶುಚಿಕಿತ್ಸಾಲಯ ಗಳನ್ನಾಗಿ ಮೇಲ್ದರ್ಜೆಗೆ ಏರಿಸಲು ಕ್ರಮ ಕೈಗೊಳ್ಳಲಾಗಿದೆ, ಅವುಗಳು ಯಾವುವು?

ಆ) ಹೊಸದಾಗಿ ಮಂಜೂರಾದ ಪಶುವೈದ್ಯಕೀಯ ಆಸ್ಪತ್ರೆಗಳ ಸಂಖ್ಯೆ ಎಷ್ಟು? ಅವುಗಳು ಯಾವುವು?

ಇ) ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಆಸ್ಪತ್ರೆಗಳ ಸಂಖ್ಯೆ : ಎಷ್ಟು ಇವುಗಳಿಗೆ ಸ್ವಂತ ಕಟ್ಟಡ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಎ. ಕೃಷ್ಣಪ್ಪ (ಪಶುಸಂಗೋಪನಾ ಹಾಗೂ ಸಕ್ಕರೆ ಸಚಿವರು) :

ಅ) 1999-2000ರಲ್ಲಿ ಯಾವುದೂ ಇಲ್ಲ.

ಆ) 1999-2000ರಲ್ಲಿ ಯಾವುದೂ ಇಲ್ಲ.

ಇ) ಯಾವುದೂ ಇಲ್ಲ.

ಈ) ಉದ್ಭವಿಸುವುದಿಲ್ಲ.

**ಗುಂಡ್ಲು ಪೇಟೆ ಪಟ್ಟಣದಲ್ಲಿ ಬೈಪಾಸ್ ರಸ್ತೆ ನಿರ್ಮಾಣ.**

1286 (1659) ಶ್ರೀ ಮಹದೇವ ಪ್ರಸಾದ್ ಹೆಚ್. ಎಸ್ (ಗುಂಡ್ಲುಪೇಟೆ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಷ್ಟ್ರೀಯ ಹೆದ್ದಾರಿ ಸಂಖ್ಯೆ-212 ಎಷ್ಟು ಕಿ.ಮೀ. ಉದ್ದ ಇದೆ; ಇದರ ಅಭಿವೃದ್ಧಿಗೆ ಈ ಸಾಲಿನಲ್ಲಿ ಎಷ್ಟು ಹಣ ಒದಗಿಸಲಾಗಿದೆ.